# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು – 572 103
ದೂರವಾಣಿ: 0816–2254546, 0816–2255596, 0816–2255597 ಫ್ಯಾಕ್ಸ್: 0816–2270719

ಸಂಖ್ಯೆ:ತು.ವಿ:ಖ.ಕೋ:2022–23/8212 ದಿನಾಂಕ:24.06.2022

## ದರಪಟ್ಟಿ ಆಹ್ವಾನ (ವಿ.ವಿ ವೆಬ್ ಸೈಟ್ ಮುಖಾಂತರ)

ವಿಷಯ: ವಿಶ್ವವಿದ್ಯಾನಿಲಯದ ಪರೀಕ್ಷಾ ವಿಭಾಗಕ್ಕೆ ಬಯೋಮೆಟ್ರಿಕ್ ಯಂತ್ರಗಳನ್ನು ಅಳವಡಿಸಲು ದರಪಟ್ಟಿಗಳನ್ನು ಆಹ್ವಾನಿಸಿರುವ ಕುರಿತು.

ಉಲ್ಲೇಖ: 1. ಕುಲಸಚಿವರು (ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರ ಪತ್ರ ಸಂಖ್ಯೆ:ತು.ವಿ:ಪವಿ:ವಿನಿ–07:2022–23/146,ದಿನಾಂಕ:07.06.2022.
2. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:23.06.2022.

*****

ವಿಶ್ವವಿದ್ಯಾನಿಲಯದ ಪರೀಕ್ಷಾ ವಿಭಾಗಕ್ಕೆ ಬಯೋಮೆಟ್ರಿಕ್ ಯಂತ್ರಗಳನ್ನು ಅಳವಡಿಸುವ ಸಂಬಂಧ ಕೆಳಕಂಡ ಷರತ್ತುಗಳಿಗೊಳಪಟ್ಟು ದರಪಟ್ಟಿಗಳನ್ನು ಆಹ್ವಾನಿಸಲಾಗಿದ್ದು, **ಬಯೋಮೆಟ್ರಿಕ್ ಯಂತ್ರದ ವೈಶಿಷ್ಟತೆಗಳು ಈ ಕೆಳಕಂಡಂತಿವೆ.**

| Sl. No. | Particulars | Specification | Qty | Price Rs. (inclu. tax) |
|---|---|---|---|---|
| 01 | Bio metric with Time attendance & access control system. | **Model:** ESSL Silk Bio – 101 TC. | 04. | |

**ಷರತ್ತುಗಳು:**

1. ಮುಚ್ಚಿದ ಲಕೋಟೆಯ ಮೇಲೆ " ವಿಶ್ವವಿದ್ಯಾನಿಲಯದ ಪರೀಕ್ಷಾ ವಿಭಾಗಕ್ಕೆ ಬಯೋಮೆಟ್ರಿಕ್ ಯಂತ್ರವನ್ನು ಅಳವಡಿಸಲು ದರಪಟ್ಟಿ" ಎಂದು ನಮೂದಿಸತಕ್ಕದ್ದು.
2. ದರಪಟ್ಟಿಗಳನ್ನು ಕುಲಸಚಿವರು, ವಿಶ್ವವಿದ್ಯಾನಿಲಯ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್.ರಸ್ತೆ ತುಮಕೂರು–572 103, ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಕ್ಕೆ ವಿಶ್ವವಿದ್ಯಾನಿಲಯವು ಜವಾಬ್ದಾರರಾಗುವುದಿಲ್ಲ.
3. ದರಪಟ್ಟಿಯನ್ನು ಸಲ್ಲಿಸಲು ಕೊನೆಯ ದಿನಾಂಕ: **07.07.2022 ಅಪರಾಹ್ನ 12.00 ಗಂಟೆ.**
4. ದರಪಟ್ಟಿಯನ್ನು ದಿನಾಂಕ: **08.07.2022** ರಂದು ಅಪರಾಹ್ನ **4.00** ಗಂಟೆಗೆ ತೆರೆಯಲಾಗುವುದು.
5. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ತಮ್ಮ ಸಂಸ್ಥೆಯ GSTIN No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.
6. ದರಪಟ್ಟಿಯ ಅವಧಿಯು ದರಪಟ್ಟಿಯನ್ನು ತೆರೆದ ದಿನಾಂಕದಿಂದ 60 ದಿನಗಳ ಅವಧಿಯವರೆಗೆ ಚಾಲ್ತಿಯಲ್ಲಿರುತ್ತದೆ.
7. ಸರಬರಾಜು ಮಾಡಲು ಯಾವುದೇ ಮುಂಗಡ ಹಣವನ್ನು ನೀಡಲಾಗುವುದಿಲ್ಲ.
8. ದರಪಟ್ಟಿಯಲ್ಲಿ ನಮೂದಿಸಿದ ದರಗಳು ತೆರಿಗೆ ಮತ್ತು ಸಾಗಾಣಿಕೆ ವೆಚ್ಚವನ್ನು ಒಳಗೊಂಡಿರತಕ್ಕದ್ದು.
9. ದರಪಟ್ಟಿಯಲ್ಲಿ ನಮೂದಿಸಿರುವ ಉಪಕರಣದ ಪ್ರಮಾಣವನ್ನು ಹೆಚ್ಚಿಸುವ ಅಥವಾ ಕಡಿಮೆಗೊಳಿಸುವ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿರುತ್ತದೆ.
10. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.

(ಪು.ತಿ.ನೋ)

11. ದರಪಟ್ಟಿಗಳ ಆಯ್ಕೆಯ ವಿಷಯದಲ್ಲಿ ತುಮಕೂರು ವಿಶ್ವವಿದ್ಯಾನಿಲಯವು ರಚಿಸಿಕೊಂಡಿರುವ ನಿಯಮಾವಳಿಗೆ ಬದ್ಧವಾಗಿ ಆಯ್ಕೆ ಮಾಡಲಾಗುವುದು ಮತ್ತು ಇದರಲ್ಲಿ ವಿಶ್ವವಿದ್ಯಾನಿಲಯದ ತೀರ್ಮಾನವೇ ಅಂತಿಮವಾಗಿರುತ್ತದೆ.
12. ತಮ್ಮ ಸಂಸ್ಥೆಯಿಂದ ಅಳವಡಿಸಲು ಉದ್ದೇಶಿಸಿರುವ ಬಯೋಮೆಟ್ರಿಕ್ ಯಂತ್ರದ ಸಂರಚನೆಯಲ್ಲಿ ವ್ಯತ್ಯಾಸ ಇದ್ದರೆ ಸಂರಚನೆಯ ಮಾಹಿತಿಯನ್ನು ದರಪಟ್ಟಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸುವುದು.
13. ಷರತ್ತು ಬದ್ದ ದರಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ.
14. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.
15. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.
16. ಹೆಚ್ಚಿನ ವಿವರಗಳು ಅಥವಾ ಮಾಹಿತಿಯು ಅಗತ್ಯವಿದ್ದಲ್ಲಿ ಕುಲಸಚಿವರು (ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರನ್ನು ಸಂಪರ್ಕಿಸಬಹುದು.

ಆದೇಶದ ಮೇರೆಗೆ,

27/6/2022

ಉಪ ಕುಲಸಚಿವರು

ಉಪ ಕುಲಸಚಿವರು
(ಸಾಮಾನ್ಯ ವಿಭಾಗ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಪ್ರತಿಗಳು:

1. ಕುಲಸಚಿವರು (ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸತಕ್ಕದ್ದು)
3. ಕಚೇರಿ ಪ್ರತಿ.